## ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಹೊನ್ನಾಳಿ

ಸಿ.ಸಿ.13/2014

ಸಾಕ್ಷಿದಾರರ ಹೇಳಿಕೆಃ

| | | | | |
|---|---|---|---|---|
| ಹೆಸರು | : | ಬಾಹುಬಲಿ ರಾಜು | CW: 6 | PW: 9 |
| ತಂದೆಯ ಹೆಸರು | : | ಎಂ.ಡಿ.ಆದಿರಾಜಯ್ಯ | | |
| ವಯಸ್ಸು | : | 80 | | |
| ವೃತ್ತಿ | : | ವ್ಯವಸಾಯ | | |
| ವಾಸಸ್ಥಳ | : | ಮಂಡ್ಯ | | |

ದಂಡ ಪ್ರಕ್ರಿಯಾ ಸಂಹಿತೆಯ ಕಲಂ 299 ರಡಿಯಲ್ಲಿ ಸಾಕ್ಷ್ಯವಿಚಾರಣೆ

ದಿನಾಂಕಃ 02.12.2025 ರಂದು ಸಾಕ್ಷಿಯನ್ನು ಕರೆದು ಪ್ರಮಾಣವಚನ ಭೋಧಿಸಲಾಯಿತು.

ಮುಖ್ಯವಿಚಾರಣೆಃ – ಮಾನ್ಯ ಸ.ಸ.ಅ.ರವರಿಂದಃ–

ಈಗ್ಗೆ ಸುಮಾರು 15 ವರ್ಷಗಳ ಹಿಂದೆ ನಾನು ನ್ಯಾಮತಿ ಪೊಲೀಸ್ ಠಾಣೆಯ ಮುಂಭಾಗದಲ್ಲಿ ಹೋಗುತ್ತಿದ್ದಾಗ ಪೋಲೀಸರ ಕೋರಿಕೆಯ ಮೇರೆಗೆ 1 ದಾಖಲೆಗೆ ಸಹಿ ಮಾಡಿರುತ್ತೇನೆ. ಅದರಲ್ಲಿ ಏನು ಬರೆದಿದೆ ಎನ್ನುವ ವಿಚಾರ ನನಗೆ ಗೊತ್ತಿಲ್ಲ. ಪೊಲೀಸರು ಠಾಣೆಯಲ್ಲಿ ನನಗೆ ಈ ಕೇಸಿನ ಆರೋಪಿತರನ್ನು ತೋರಿಸಿರುವುದಿಲ್ಲ ಮತ್ತು ನಮ್ಮನ್ನು ಎಲ್ಲಿಗೂ ಕರೆದುಕೊಂಡು ಹೋಗಿರುವುದಿಲ್ಲ ಹಾಗೂ ನನ್ನ ಸಮಕ್ಷಮ ಯಾವುದೇ ಮಹಜರ್ ಮಾಡಿರುವುದಿಲ್ಲ ಮತ್ತು ಯಾವುದೇ ವಸ್ತುಗಳನ್ನು ಅಮಾನತ್ತುಪಡಿಸಿಕೊಂಡಿರುವುದಿಲ್ಲ. ಸದರಿ ದಾಖಲೆಗೆ ನನ್ನ ಜೊತೆ ಯಾರು ಯಾರು ಸಹಿ ಮಾಡಿದ್ದಾರೆ ಎನ್ನುವ ವಿಚಾರ ನನಗೆ ಗೊತ್ತಿಲ್ಲ. ಸಾಕ್ಷಿಯು ನಿಪಿ 11 ರಲ್ಲಿ ತನ್ನ ಸಹಿಯನ್ನು ನೋಡಿ ಗುರುತಿಸಿರುತ್ತಾರೆ.

(ಸದರಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಮಾನ್ಯ ಸ.ಸ.ಅ ರವರು ಅನುಮತಿ ಕೋರಿದ್ದಾರೆ. ಸೂಕ್ತ ಕಾರಣ ನೀಡಿದ ಮೇರೆಗೆ ಅನುಮತಿ ನೀಡಲಾಗಿದೆ.)

ಪಾಟೀ ಸವಾಲುಃ- ಸಹಾಯಕ ಸರ್ಕಾರಿ ಅಭಿಯೋಜಕರಿಂದ

ದಿಃ 06.02.2005 ರಂದು ಪೋಲೀಸರು ನನ್ನನ್ನು ಮತ್ತು ಚಾಸಾ 8 ರವರನ್ನು ಠಾಣೆಗೆ ಕರಸಿ, ತಮ್ಮ ವಶದಲ್ಲಿದ್ದ 2 ನೇ ಆರೋಪಿಯನ್ನು ತೋರಿಸಿ, ಪ್ರಕರಣದ ವಿಚಾರವನ್ನು ತಿಳಿಸಿ, 2 ನೇ ಆರೋಪಿ ನಮ್ಮನ್ನು ಎಲ್ಲಿಗೆ ಕರೆದುಕೊಂಡು ಹೋಗುತ್ತಾನೋ ಮತ್ತು ಆತ ಹಾಜರುಪಡಿಸಿದ ವಸ್ತುಗಳನ್ನು ತೋರಿಸುತ್ತಾನೋ ಆ ಸಮಯದಲ್ಲಿ ಪಂಚರಾಗಿ ಸಹಕರಿಸಬೇಕೆಂದು ಕೇಳಿಕೊಂಡ ಮೇರೆಗೆ ನಾನು ಒಪ್ಪಿ ಅವರ ಜೊತೆಯಲ್ಲಿ ಹೋಗಿ, ಮಂಡ್ಯ ನಗರದ ಚಾಸಾ 7 ರವರನ್ನು ಸಹ ಜೊತೆಯಲ್ಲಿ ಕರೆದುಕೊಂಡು ಗಣಪತಿ ಸರ್ಕಲ್ ಬಳಿ ಇರುವ ತನ್ನ ಮನೆಗೆ 2 ನೇ ಆರೋಪಿ ಕರೆದು ಕೊಂಡು ಹೋದ ಎಂದರೆ ಸರಿಯಲ್ಲ. ಆರೋಪಿ ತನ್ನ ಮನೆಯಲ್ಲಿಟ್ಟಿದ್ದ 25 ಕೆ.ಜಿ ತೂಕದ 12 ಅಕ್ಕಿ ತುಂಬಿದ ಚೀಲಗಳನ್ನು ಮತ್ತು 5 ಅಕ್ಕಿ ತುಂಬುವ ಖಾಲಿ ಚೀಲಗಳನ್ನು ಹಾಜರುಪಡಿಸಿದ ಎಂದರೆ ಸರಿಯಲ್ಲ. ಪೋಲೀಸರು ಅವುಗಳನ್ನು ಮಧ್ಯಾಹ್ನ 1 ರಿಂದ 1.30 ಗಂಟೆಯಲ್ಲಿ ನಿಪಿ 11 ರಂತೆ ಅಮಾನತ್ತು ಮಹಜರ್ ಮಾಡಿ ನನ್ನ ಮತ್ತು ಚಾಸಾ 7 ಮತ್ತು 8 ರವರು ಹಾಜರಿದ್ದು ನಿಪಿ 11 ಕ್ಕೆ ಸಹಿ ಮಾಡಿರುತ್ತೇವೆ ಎಂದರೆ ಸರಿಯಲ್ಲ. ಸದರಿ ಅಕ್ಕಿ ಚೀಲಗಳನ್ನು ನ್ಯಾಯಾಲಯದ ಆದೇಶದ ಮೇರೆಗೆ ಚಾಸಾ 1 ರವರಿಗೆ ವಶಕ್ಕೆ ನೀಡಲಾಗಿದೆ. (ಮೂಲ ಪ್ರಕರಣ ಸಂಖ್ಯೆ ಸಿಸಿ.443/2006). ನನಗೆ ಈ ಪ್ರಕರಣದ ಎಲ್ಲಾ ವಿಚಾರ ಗೊತ್ತಿದ್ದರೂ ಸಹ ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

ಪಾಟೀ ಸವಾಲು ಃ ಆರೋಪಿಗಳು ತಲೆಮರಿಸಿಕೊಂಡಿರುವುದರಿಂದ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

ಸಾ. ಹೇ. ತೆ. ನ್ಯಾ. ಬೆ. ಮಾಡಿಸಲಾಯಿತು.

ಓ. ಹೇ. ಕೇ. ಸ. ಇದೆ.

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಹೊನ್ನಾಳಿ.